




ದಿನಾಂಕ: 09-09-23 ರಂದು ಸೌತ್ ಕೆನರಾ ಫಿಸಿಯೋಥೆರಪಿ ಶಿಕ್ಷಕರ ಸಂಘದ ಆಶ್ರಯದಲ್ಲಿ ನಗರದ ಟಿಎಂಎ ಪೈ ಸಭಾಂಗಣದಲ್ಲಿ ನಡೆದ ಎರಡು ದಿನಗಳ 'ಮಂಗಳೂರು ಫಿಸಿಯೋಕಾನ್ ಅಂತರ್ ರಾಷ್ಟ್ರೀಯ ಸಮ್ಮೇಳನ'ದ ಸಮಾರೋಪ ಸಮಾರಂಭದಲ್ಲಿ ಶನಿವಾರ ಮುಖ್ಯ ಅತಿಥಿಯಾಗಿ ಭಾಗವಹಿಸಿದ ಮಾನ್ಯ ಸಭಾಪತಿ ಶ್ರೀ ಬಸವರಾಜ ಎಸ್‌ಹೊರಟ್ಟಿ ಅವರು  ಆರೋಗ್ಯ ವೃದ್ಧಿಗೆ ಫಿಸಿಯೋಥೆರಪಿ ಅಗತ್ಯ ವೈದ್ಯರಷ್ಟೇ ಪ್ರಾಮುಖ್ಯತೆ ಇವತ್ತಿನ ದಿನಗಳಲ್ಲಿ ಫಿಸಿಯೋಥೆರಪಿಸ್ಟ್‌ಗಳಿಗೆ ಇದೆ. ಪ್ರತಿಯೊಂದು ಶಸ್ತ್ರಚಿಕಿತ್ಸೆಯ ಬಳಿಕ ಫಿಸಿಯೋಥೆರಪಿಗೆ ವೈದ್ಯರು ಸಲಹೆ ನೀಡುತ್ತಾರೆ. ಮುಂದಿನ ದಿನಗಳಲ್ಲಿ ಇದರ ಬೇಡಿಕೆ ಇನ್ನಷ್ಟು ಹೆಚ್ಚಾಗಲಿದೆ ಎಂದು ತಿಳಿಸಿದರು.